Akashvani : Bangalore

Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

03.09.2026 18.40 hrs

---

ಮುಖ್ಯಾಂಶಗಳು

- ಬರ, ಕಸ್ತೂರಿ ರಂಗನ್ ವರದಿ ಕುರಿತಂತೆ ಚರ್ಚಿಸಲು ಮೂರು ದಿನ ವಿಶೇಷ ಅಧಿವೇಶನ ನಡೆಸಲು ಸಂಪುಟ ಸಭೆ ತೀರ್ಮಾನ
- ಉದ್ಯಾನವನಗಳ ಸಂರಕ್ಷಣೆ ತಿದ್ದುಪಡಿ ವಿಧೇಯಕ ಹಿಂಪಡೆದ ಸರ್ಕಾರ
- ಮಸೂದೆ ಹಿಂಪಡೆದಿರುವುದು ಹೋರಾಟಕ್ಕೆ ಸಂದ ಜಯ - ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅಭಿಮತ
- ಹಂತ ಹಂತವಾಗಿ ೧೮ ಸಾವಿರ ಶಿಕ್ಷಕರ ನೇಮಕ - ಸಚಿವ ಮಧು ಬಂಗಾರಪ್ಪ ಸ್ಪಷ್ಟನೆ
- ಇಂಧನ ಇಲಾಖೆಯಿಂದ ರಾಜ್ಯದ ಒಟ್ಟು ವಿದ್ಯುತ್ ಉತ್ಪಾದನಾ ಸಾಮರ್ಥ್ಯ ೨೦೩೦ರ ವೇಳೆಗೆ ೬೮ ಗಿಗಾವ್ಯಾಟ್‌ಗೆ ಹೆಚ್ಚಿಸುವ ಗುರಿ

---

ಉದ್ಯಾನವನಗಳ ತಿದ್ದುಪಡಿ ವಿಧೇಯಕ ವಾಪಸ್ ಪಡೆಯಲು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅಧ್ಯಕ್ಷತೆಯಲ್ಲಿ ನಡೆದ ಸಂಪುಟ ಸಭೆಯಲ್ಲಿ ಸರ್ಕಾರ ನಿರ್ಧರಿಸಿದೆ.

ಜನರ ಆಕ್ಷೇಪ ಮತ್ತು ಪರಿಸರ ಸಂರಕ್ಷಣೆ ವಿಚಾರ ಗಮನದಲ್ಲಿಟ್ಟುಕೊಂಡು ಸರ್ಕಾರ ತನ್ನ ನಿಲುವು ಬದಲಾಯಿಸಿದೆ. ಸಂಪುಟ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್, ಸೆಪ್ಟೆಂಬರ್ ೨೧ರಿಂದ ಮೂರು ದಿನ ವಿಶೇಷ ಅಧಿವೇಶನಕ್ಕೆ ತೀರ್ಮಾನಿಸಲಾಗಿದೆ ಎಂದು ತಿಳಿಸಿದ್ದಾರೆ. ಅಧಿವೇಶನದಲ್ಲಿ ಪ್ರಮುಖವಾಗಿ ರಾಜ್ಯದಲ್ಲಿನ ಬರಗಾಲ, ಕಸ್ತೂರಿ ರಂಗನ್ ವರದಿ, ಕುರಿತಂತೆ ಚರ್ಚೆ ನಡೆಸಲಾಗುವುದು ಎಂದು ಹೇಳಿದ್ದಾರೆ.

ರಾಜ್ಯದಲ್ಲಿ ಹೊಸ ಜಾಗತಿಕ ಹೂಡಿಕೆ ಮತ್ತು ವಿದೇಶಾಂಗ ವ್ಯವಹಾರಗಳ ಇಲಾಖೆ ಸ್ಥಾಪನೆಗೂ ತೀರ್ಮಾನಿಸಲಾಗಿದೆ. ಈ ಇಲಾಖೆಯ ಜೊತೆಗೆ ಸ್ಟೇಟ್ ಫೆಸಿಲಿಟೇಶನ್ ಕೌನ್ಸಿಲ್ ರಚನೆಗೂ ಸರ್ಕಾರ ನಿರ್ಧರಿಸಿದೆ. ಈ ಕೌನ್ಸಿಲ್‌ಗೆ ಮುಖ್ಯಮಂತ್ರಿ ಅಧ್ಯಕ್ಷರಾಗಿದ್ದು, ಉಪಮುಖ್ಯಮಂತ್ರಿ ಉಪಾಧ್ಯಕ್ಷರಾಗಿರುತ್ತಾರೆ. ಕೃಷಿ, ತೋಟಗಾರಿಕೆ ಐಟಿ-ಬಿಟಿ ಸೇರಿದಂತೆ ಉಳಿದ ಸಚಿವರು ಸದಸ್ಯರಾಗಿರುತ್ತಾರೆ ಎಂದು ಉಪಮುಖ್ಯಮಂತ್ರಿ ಮಾಹಿತಿ ನೀಡಿದ್ದಾರೆ.

ಬಿಎಂಇ ಡ್ರೈವ್ ಯೋಜನೆಯಡಿ ಕೇಂದ್ರ ಸರ್ಕಾರ ಒಟ್ಟು ೪ ಸಾವಿರದ ೫೦೦ ಎಲೆಕ್ಟ್ರಿಕ್ ಬಸ್‌ಗಳನ್ನು ಮಂಜೂರು ಮಾಡಿದೆ. ಆರು ಕಂಪನಿಗಳಿಗೆ ಕೇಂದ್ರ ಸರ್ಕಾರ ಟೆಂಡರ್ ನೀಡಿದ್ದು, ವಿವಿಧ ಮಾದರಿಯ ಬಸ್‌ಗಳು ರಾಜ್ಯಕ್ಕೆ ಆಗಮಿಸಲಿವೆ ಎಂದು ತಿಳಿಸಿದ್ದಾರೆ. ಬಳ್ಳಾರಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಮಹರ್ಷಿ ವಾಲ್ಮೀಕಿ ಪುತ್ಥಳಿ ಸ್ಥಾಪನೆಗೂ ಸಂಪುಟ ಅನುಮೋದನೆ ನೀಡಿದೆ.

---

ಉದ್ಯಾನವನಗಳ ತಿದ್ದುಪಡಿ ವಿಧೇಯಕ ಸರ್ಕಾರ ಹಿಂಪಡೆದಿರುವುದು ಪ್ರತಿಪಕ್ಷಗಳ ಹೋರಾಟಕ್ಕೆ ಸಂದ ಜಯ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ತಿಳಿಸಿದ್ದಾರೆ.

ಮೂರು ದಿನದ ಬಳ್ಳಾರಿ ಚಲೋ ಪಾದಯಾತ್ರೆಯಲ್ಲಿ ಭಾಗವಹಿಸಿ ಗುಡದೂರಿನಲ್ಲಿ ಮಾತನಾಡಿದ ಅವರು, ವಿಧಾನಮಂಡಲದ ವಿಶೇಷ ಅಧಿವೇಶನ ಕರೆದಿರುವುದು ಪ್ರತಿಪಕ್ಷಗಳ ಹೋರಾಟಕ್ಕೆ ಮಣಿದು, ತೆಗೆದುಕೊಂಡಿರುವ ನಿರ್ಧಾರ ಎಂದು ಅಭಿಪ್ರಾಯಪಟ್ಟಿದ್ದಾರೆ.

ಅಧಿವೇಶನದಲ್ಲಿ ರಾಜ್ಯದ ರೈತರ ಸಮಸ್ಯೆಗಳ ಬಗ್ಗೆ ಚರ್ಚಿಸಬೇಕು ಎಂದು ಆಗ್ರಹಿಸಿದ್ದಾರೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಬರದಿಂದ ತತ್ತರಿಸಿರುವ ರೈತರ ಸಮಸ್ಯೆಯನ್ನು ಖುದ್ದು ಆಲಿಸುವಂತೆ ಮನವಿ ಮಾಡಿದ್ದಾರೆ.

---

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಆಡಳಿತಕ್ಕೆ ಬಂದ ಬಳಿಕ ೧೩ ಸಾವಿರದ ೫೦೦ ಶಿಕ್ಷಕರನ್ನು ಈಗಾಗಲೇ ನೇಮಕ ಮಾಡಲಾಗಿದೆ ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ.

ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ಸರ್ಕಾರ ಈಗಾಗಲೇ ವಿವಿಧ ಇಲಾಖೆಗಳಲ್ಲಿ ಸುಮಾರು ೭೨ ಸಾವಿರ ಹುದ್ದೆಗಳ ಭರ್ತಿಗೆ ನಿರ್ಧರಿಸಿದ್ದು, ಶಿಕ್ಷಣ ಇಲಾಖೆಯಲ್ಲಿ ೧೮ ಸಾವಿರ ಶಿಕ್ಷಕರನ್ನು ನೇಮಕ ಮಾಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

ಹಂತ ಹಂತವಾಗಿ ಶೀಘ್ರವೇ ನೇಮಕಾತಿ ಪ್ರಕ್ರಿಯೆ ಆರಂಭಿಸುವುದಾಗಿ ಹೇಳಿದ್ದಾರೆ. ಇದೇ ವೇಳೆ ಅನುದಾನಿತ ಶಾಲೆಗಳ ೮ ಸಾವಿರ ಶಿಕ್ಷಕರನ್ನು ನೇಮಕ ಮಾಡಲಾಗುವುದು ಎಂದು ತಿಳಿಸಿದ್ದಾರೆ.

****ಧ್ವನಿ****ಮಧು ಬಂಗಾರಪ್ಪ

---

ರಾಜ್ಯದ ಒಟ್ಟು ವಿದ್ಯುತ್ ಉತ್ಪಾದನಾ ಸಾಮರ್ಥ್ಯವನ್ನು ೨೦೩೦ರ ವೇಳೆಗೆ ಪ್ರಸ್ತುತ ಇರುವ ೩೯ ಗಿಗಾವ್ಯಾಟ್‌ನಿಂದ ೬೮ ಗಿಗಾವ್ಯಾಟ್‌ಗೆ ಹೆಚ್ಚಿಸುವ ಹತ್ತು ವರ್ಷಗಳ ಕಾರ್ಯತಂತ್ರವನ್ನು ಸರ್ಕಾರ ರೂಪಿಸಿದೆ.

ನವದೆಹಲಿಯಲ್ಲಿ ನಡೆದ ಭಾರತ್ ಎಲೆಕ್ಟ್ರಿಸಿಟಿ, ಪವರ್‌ಜೆನ್ ಇಂಡಿಯಾ ಮತ್ತು ಇಂಡಿಯನ್ ಯುಟಿಲಿಟಿ ವೀಕ್-೨೦೨೬ರ ಸಮ್ಮೇಳನದಲ್ಲಿ ಮಾತನಾಡಿದ ಇಂಧನ ಇಲಾಖೆ ಅಪರ ಕಾರ್ಯದರ್ಶಿ ಗೌರವ್ ಗುಪ್ತಾ, ವಿದ್ಯುತ್ ಸಾಮರ್ಥ್ಯ ಹೆಚ್ಚಳದ ಗುರಿ ಸಾಧಿಸಲು ರಾಜ್ಯವು ನವೀಕರಿಸಬಹುದಾದ ಇಂಧನ ಮೂಲಗಳಿಗೆ ಆದ್ಯತೆ ನೀಡಲಿದೆ ಎಂದು ತಿಳಿಸಿದ್ದಾರೆ.

ಪಾವಗಡ ಸೋಲಾರ್ ಪಾರ್ಕ್ ವಿಸ್ತರಣೆ ಜೊತೆಗೆ ಪವನ ವಿದ್ಯುತ್ ಸಾಮರ್ಥ್ಯವನ್ನು ಹೆಚ್ಚಿಸಲಾಗುತ್ತಿದೆ. ಪಿಎಂ-ಕುಸುಮ್ ಸಿ ಮತ್ತು ಮುಖ್ಯಮಂತ್ರಿ ಸೌರ ಕೃಷಿ ಯೋಜನೆ ಮೂಲಕ ಕೃಷಿ ಫೀಡರ್‌ಗಳ ಸೌರೀಕರಣಕ್ಕೂ ಉತ್ತೇಜನ ನೀಡಲಾಗುತ್ತಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಇಂಧನ ಸಂಗ್ರಹಣೆ ಮತ್ತು ಪ್ರಸರಣಾ ಕ್ಷೇತ್ರಗಳಲ್ಲಿನ ಖಾಸಗಿ ಪಾಲ್ಗೊಳ್ಳುವಿಕೆಗೆ ಉತ್ತೇಜನ ನೀಡಲಾಗುತ್ತಿದ್ದು, ಮುಂದಿನ ಐದು ವರ್ಷಗಳಲ್ಲಿ ಎರಡರಿಂದ ಮೂರು ಲಕ್ಷ ಕೋಟಿ ರೂಪಾಯಿ ಖಾಸಗಿ ಹೂಡಿಕೆಯನ್ನು ಆಕರ್ಷಿಸುವ ನಿರೀಕ್ಷೆ ಇದೆ ಎಂದು ಹೇಳಿದ್ದಾರೆ.

---

ಜಾರ್ಖಂಡ್‌ನಲ್ಲಿ ಇಕೋ ಟೂರಿಸಂ ಅಭಿವೃದ್ಧಿಗೆ ರಾಜ್ಯ ಮಾರ್ಗದರ್ಶನ ನೀಡಲಿದೆ. ಬೆಂಗಳೂರಿಗೆ ಆಗಮಿಸಿದ ಜಾರ್ಖಂಡ್ ನಿಯೋಗ ಇಂದು ಇಕೋ ಟೂರಿಸಂ ಮತ್ತು ಪ್ರವಾಸೋದ್ಯಮ ಮಾದರಿಯನ್ನು ಅಧ್ಯಯನ ನಡೆಸಿತು. ಶೀಘ್ರವೇ ಉಭಯ ರಾಜ್ಯಗಳ ನಡುವೆ ಒಪ್ಪಂದ ಮಾಡಿಕೊಳ್ಳಲಾಗುವುದು ಎಂದು ಇಂಧನ ಹಾಗೂ ಪ್ರವಾಸೋದ್ಯಮ ಸಚಿವ ಕೆ.ಜೆ. ಜಾರ್ಜ್ ತಿಳಿಸಿದ್ದಾರೆ.

ಈ ಮೂಲಕ ಕರ್ನಾಟಕ ಇತರ ರಾಜ್ಯಗಳಿಗೆ ಪ್ರವಾಸೋದ್ಯಮ ಅಭಿವೃದ್ಧಿಯಲ್ಲಿ ಮಾರ್ಗದರ್ಶಕ ಶಕ್ತಿಯಾಗಿ ಹೊರಹೊಮ್ಮುತ್ತಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಇದೇ ವೇಳೆ ರಾಜ್ಯದ ಪ್ರವಾಸೋದ್ಯಮ ಮಾದರಿಗಳನ್ನು ಜಾರ್ಖಂಡ್ ಪ್ರವಾಸೋದ್ಯಮ ಸಚಿವ ಸುದಿವ್ಯ ಕುಮಾರ್ ಶ್ಲಾಘಿಸಿದ್ದಾರೆ.

---

ಕೆಪಿಎಸ್‌ಸಿ ನೇಮಕಾತಿ ಪ್ರಕರಣದಲ್ಲಿ ಬಂಧಿತ ಐಎಎಸ್ ಅಧಿಕಾರಿ ಜ್ಞಾನೇಂದ್ರ ಕುಮಾರ್, ಪ್ರಭಾವಿ ವ್ಯಕ್ತಿಗಳಿಂದ ಕ್ಷಣ ಕ್ಷಣದ ಮಾಹಿತಿ ಪಡೆಯುತ್ತಿದ್ದಾರೆ ಎಂದು ಜಾರಿ ನಿರ್ದೇಶನಾಲಯದ ಅಧಿಕಾರಿಗಳು ತಿಳಿಸಿದ್ದಾರೆ.

ಇಡಿ ನೋಟಿಸ್‌ಗೆ ಪ್ರತಿಕ್ರಿಯೆ ನೀಡದಂತೆ ಹಾಗೂ ಸಿಐಡಿ ವಿಚಾರಣೆಗೆ ಹಾಜರಾಗುವಂತೆ ಪ್ರಭಾವಿ ವ್ಯಕ್ತಿಗಳು ಸಲಹೆ ನೀಡಿದ್ದಾರೆ ಎಂದು ಐಎಎನ್‌ಎಸ್ ಸುದ್ದಿ ಸಂಸ್ಥೆ ವರದಿ ಮಾಡಿದೆ.

ಬೆಂಗಳೂರಿನಿಂದ ನಾಪತ್ತೆಯಾಗಿ, ನೋಯ್ಡಾದಲ್ಲಿದ್ದಾಗ, ಇಡಿ ಅಧಿಕಾರಿಗಳು ಯಾವುದೇ ಸಂದರ್ಭದಲ್ಲಿ ದಾಳಿ ನಡೆಸಬಹುದು ಎಂದು ಮಾಹಿತಿ ನೀಡಿರುವುದಾಗಿ ತಿಳಿಸಿದೆ.

---

ಕಸ್ತೂರಿ ರಂಗನ್ ವರದಿ ವಿರೋಧಿಸಿ ಶಿವಮೊಗ್ಗದ ಸಾಗರಲ್ಲಿಂದು ಪಶ್ಚಿಮಘಟ್ಟ ರೈತ ಸಹಕಾರ ವೇದಿಕೆ ಪಾದಯಾತ್ರೆ ನಡೆಸಿತು.

ಸಾಗತ ತಾಲೂಕಿನ ಆವಿನಹಳ್ಳಿ ಗ್ರಾಮದಿಂದ ಸಾಗರದವರೆಗೂ ಪಾದಯಾತ್ರೆ ನಡೆಸಿದ ಹೋರಾಟಗಾರರು ಕಸ್ತೂರಿ ರಂಗನ್ ವರದಿ ಮಾರ್ಪಾಡು ಮಾಡುವಂತೆ ಆಗ್ರಹಿಸಿದ್ದಾರೆ. ಜನವಸತಿ ಹಾಗೂ ಕೃಷಿ ಭೂಮಿಯನ್ನು ವರದಿಯಿಂದ ಸಂಪೂರ್ಣವಾಗಿ ಕೈಬಿಡಬೇಕು. ತಕ್ಷಣವೇ ನೈಜ ಸ್ಥಿತಿ ತಿಳಿಯಲು ಭೌತಿಕ ಸರ್ವೆ ನಡೆಸಬೇಕು ಎಂದು ಒತ್ತಾಯಿಸಿದ್ದಾರೆ.

ಪಾದಯಾತ್ರೆಯಲ್ಲಿ ಕಾಂಗ್ರೆಸ್ ಶಾಸಕ ಬೇಳೂರು ಗೋಪಾಲಕೃಷ್ಣ, ಮಾಜಿ ಶಾಸಕ ಹರತಾಳು ಹಾಲಪ್ಪ ಸೇರಿದಂತೆ ಹಲವು ಮುಖಂಡರು ಭಾಗವಹಿಸಿದ್ದರು.

---

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಪ್ರಜಾ ಸೇವಾ ಅಭಿಯಾನಕ್ಕೆ ಶನಿವಾರ ರಾಜ್ಯಾದ್ಯಂತ ಚಾಲನೆ ದೊರೆಯಲಿದೆ.

ವಿಜಯನಗರ ಜಿಲ್ಲೆಯ ಕೂಡ್ಲಿಗಿ ಪಟ್ಟಣದಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕಾರ್ಯಕ್ರಮಕ್ಕೆ ಚಾಲನೆ ನೀಡಲಿದ್ದಾರೆ.

ಪ್ರಜಾಸೇವಾ ಆಂದೋಲನ ಕಾರ್ಯಕ್ರಮದಡಿ ಸಾರ್ವಜನಿಕರ ಕುಂದುಕೊರತೆಗಳ ತ್ವರಿತ ಇತ್ಯರ್ಥಕ್ಕೆ ಹಾಗೂ ಗುಣಮಟ್ಟದ ಪರಿಹಾರ ಒದಗಿಸುವಂತೆ ಗದಗ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

---

ಕೊಡಗು ಜಿಲ್ಲೆಯಲ್ಲಿ ಇಂದು ಸಾಂಪ್ರದಾಯಿಕ ಹಬ್ಬವಾದ ಕೈಲು ಪೊಳದ್ ಅನ್ನು ಆಚರಿಸಲಾಯಿತು. ಮುಂಗಾರು ದಿನಗಳಲ್ಲಿ ಜಿಲ್ಲೆಯ ಹೊಲಗದ್ದೆಗಳಲ್ಲಿ ಶ್ರಮವಹಿಸಿ ದುಡಿದ ಬಳಿಕ ರೈತಾಪಿಗಳು ಕೃಷಿ ಉಪಕರಣ, ವಾಹನ, ಬಂದೂಕುಗಳಿಗೆ ಪೂಜೆ ಸಲ್ಲಿಸಿ ಕೃತಜ್ಞತೆ ಸಲ್ಲಿಸುವ ಸಂಪ್ರದಾಯವಾಗಿ ಈ ಹಬ್ಬವನ್ನು ಆಚರಿಸಲಾಗುತ್ತಿದೆ.

ಮಾಂಸಾಹಾರ ಭೋಜನ ಇಂದಿನ ದಿನದ ವಿಶೇಷವಾಗಿದ್ದು, ಗ್ರಾಮ ವ್ಯಾಪ್ತಿಯ ಮೈದಾನಗಳಲ್ಲಿ ತೆಂಗಿನ ಕಾಯಿಗೆ ಗುಂಡು ಹೊಡೆಯುವುದು ಸೇರಿದಂತೆ ವಿವಿಧ ಗ್ರಾಮೀಣ ಕ್ರೀಡೆಗಳನ್ನು ಆಯೋಜಿಸಲಾಗಿತ್ತು.

ಮಳೆ ಬಿಡುವು ನೀಡಿದ್ದ ಕಾರಣ ಸಂಭ್ರಮದಿಂದ ಕೊಡಗಿನ ಜನತೆ ಕೈಲ್ ಪೊಳದ್ ಹಬ್ಬವನ್ನು ಆಚರಿಸಿದರು.

---

ಹಾಸನಾಂಬ ಜಾತ್ರಾ ಮಹೋತ್ಸವವನ್ನು ಅತ್ಯಂತ ಅಚ್ಚುಕಟ್ಟಾಗಿ ನೆರವೇರಿಸಲು ಅಗತ್ಯ ಕ್ರಮವಹಿಸುವಂತೆ ಅಪರ ಜಿಲ್ಲಾಧಿಕಾರಿ ಕೃಷ್ಣಮೂರ್ತಿ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ಹಾಸನಾಂಬ ಮತ್ತು ಸಿದ್ದೇಶ್ವರ ಸ್ವಾಮಿ ಜಾತ್ರಾ ಮಹೋತ್ಸವದ ಸಂಬಂಧ ಸಭೆ ನಡೆಸಿ ಮಾತನಾಡಿದ ಅವರು, ದೇವಿ ದರ್ಶನಕ್ಕೆ ಆಗಮಿಸುವ ಭಕ್ತರಿಗೆ ಯಾವುದೇ ಅಡಚಣೆ ಉಂಟಾಗದಂತೆ ದೇವಿ ದರ್ಶನ ಮಾಡಿಸಬೇಕು. ಈ ನಿಟ್ಟಿನಲ್ಲಿ ಅಗತ್ಯ ಸಿದ್ಧತೆಗಾಗಿ ಟೆಂಡರ್ ಕರೆಯುವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ನಗರದ ಸ್ವಚ್ಛತೆ ಹಾಗೂ ಗುಂಡಿಗಳನ್ನು ಮುಚ್ಚಲು ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ತಿಳಿಸಿದ್ದಾರೆ.

---

ವಿಜಯನಗರ ವಿಧಾನಸಭಾ ಕ್ಷೇತ್ರದ ಶಾಸಕ ಹೆಚ್.ಆರ್. ಗವಿಯಪ್ಪ ಇಂದು ೨೫ ಪೌರಕಾರ್ಮಿಕರಿಗೆ ನೇಮಕಾತಿ ಆದೇಶ ಪತ್ರಗಳನ್ನು ವಿತರಿಸಿದರು.

ನಗರದ ಸ್ವಚ್ಛತೆ ಹಾಗೂ ಸಾರ್ವಜನಿಕ ಆರೋಗ್ಯ ಕಾಪಾಡುವಲ್ಲಿ ಪೌರಕಾರ್ಮಿಕರ ಸೇವೆ ಅತ್ಯಂತ ಮಹತ್ವದ್ದಾಗಿದ್ದು, ನೇಮಕಗೊಂಡ ಎಲ್ಲ ಫಲಾನುಭಾವಿ ಪೌರಕಾರ್ಮಿಕರಿಗೆ ಶುಭ ಹಾರೈಸಿದರು.

___________ ಮುಕ್ತಾಯ __________